PW – 2

ದಿನಾಂಕಃ 11.02.2026 ರಂದು ಸಾಕ್ಷಿಗೆ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ ಅರ್ಜಿದಾರರ ಪರ ವಕೀಲರಿಂದ –

ನಾನು ನನ್ನ ಮುಖ್ಯ ವಿಚಾರಣೆಯಾಗಿ ಶಪಥ ಪತ್ರವನ್ನು ಹಾಜರುಪಡಿಸಿರುತ್ತೇನೆ. ಶಪಥ ಪತ್ರದಲ್ಲಿ ಬರೆದಿರುವುದನ್ನು ನಾನು ಹೇಳಿ ಬರೆಯಿಸಿದ್ದು, ಬರೆದ ನಂತರ ಅದನ್ನು ನನಗೆ ಓದಿ ಹೇಳಿದ್ದು ನಂತರ ಸಹಿ ಮಾಡಿರುತ್ತೇನೆ. ನನ್ನ ಶಪಥ ಪತ್ರದಲ್ಲಿ ಬರೆದಿರುವುದು ಎಲ್ಲಾ ಸತ್ಯವಾಗಿರುತ್ತದೆ.

ನಿಪಿ–2 ರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ–2 ಎ ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಎದುರುದಾರರ ಪರ ವಕೀಲರಿಂದ –

ಅರ್ಜಿದಾರರು ಬೇರೆ ಯಾವುದೇ ಆಸ್ಪತ್ರೆಯ ಸಲಹೆಯ ಮೇರೆಗೆ ನಮ್ಮ ಆಸ್ಪತ್ರೆಗೆ ಬಂದಿರಲಿಲ್ಲ. ಅರ್ಜಿದಾರರು ಬಿಡುಗಡೆಯಾದ ನಂತರ ನಿಪಿ–2 ನ್ನು ನೀಡುವ ಸಮಯದಲ್ಲಿ ಅವರನ್ನು ನೋಡಿದ್ದೇನೆ ಎಂದರೆ ಸರಿಯಲ್ಲ. ನಾನು ಸಂಜೀವಿನಿ ಆಸ್ಪತ್ರೆಯಲ್ಲಿ ಕೆಲಸ ಮಾಡುವುದಿಲ್ಲ. ನಿಪಿ–2 ರಲ್ಲಿ ನಾನು ಅರ್ಜಿದಾರರಿಗೆ ಅನುಸರಣಾ ಚಿಕಿತ್ಸೆ ಯ ಸ್ಥಿತಿಗತಿಗಳ ಬಗ್ಗೆ ನಮೂದು ಮಾಡಿದ್ದೇನೆ. ಈ ರೀತಿ ಯಾವುದೇ ನಮೂದು ಮಾಡದೇ ಇದ್ದರೂ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಂಗನ್ಯೂನತೆ ದೇಹದ ಗಾಯದ ನಿರ್ದಿಷ್ಟ ಭಾಗಕ್ಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಂಪೂರ್ಣ ದೇಹಕ್ಕೆ ಹೋಲಿಸಿದಾಗ ಅದರ ಪ್ರಮಾಣ ಕಡಿಮೆಯಾಗುತ್ತದೆ ಎಂದರೆ ಸರಿ. ಅರ್ಜಿದಾರರಿಗೆ ಯಾವುದೇ ಅಂಗನ್ಯೂನತೆ ಇಲ್ಲದೇ ಇದ್ದರೂ ಅವರಿಗೆ ಪರಿಹಾರ ಬರಲಿ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ಬಹಿರಂಗ ನ್ಯಾಯಾಲಯದಲ್ಲಿ ನನ್ನ ಹೇಳಿಕೆ ಮೇರೆಗೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ.ಸ.ಸ.ಇದೆ.

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿಜೆಎಂ
ನ್ಯಾಯಾಲಯ, ದಾವಣಗೆರೆ